ಕರ್ನಾಟಕ ವಿಧಾನ ಪರಿಷತ್ತು

ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಸಿ.ಟಿ. ರವಿ ಇವರು ಶೂನ್ಯವೇಳೆಯಲ್ಲಿ ಪ್ರಸ್ತಾಪಿಸಿರುವ ವಿಷಯಕ್ಕೆ ಉತ್ತರ;

ಪ್ರಶ್ನೆ:

ದಿನಾಂಕ: 13.12.2025 ಕನ್ನಡ ಪ್ರಭ ದಿನಪತ್ರಿಕೆಯಲ್ಲಿ ಪ್ರಕಟವಾಗಿರುವ "ನಗರ ವಿವಿ ಎಡವಟ್ಟಿನಿಂದ 400 ಸ್ಟೂಡೆಂಟ್ಸ್ ಫೇಲ್" ಎಂಬ ಶಿರೋನಾಮೆಯಡಿ ಬೆಂಗಳೂರು ವಿಶ್ವವಿದ್ಯಾಲಯ ಮಾಡಿರುವ ಎಡವಟ್ಟಿನಿಂದ ವಿವಿಧ ಸಂಯೋಜಿತ ಕಾಲೇಜುಗಳಲ್ಲಿನ 400 ಮಂದಿ ಎಂ.ಕಾಂ. ವಿದ್ಯಾರ್ಥಿಗಳು ಅಂತಿಮ ಸೆಮಿಸ್ಟರ್ ಪರೀಕ್ಷೆಯಲ್ಲಿ ಅನುತೀರ್ಣರಾಗಿರುವ ಆರೋಪ ಕೇಳಿ ಬಂದಿದೆ. ಇದು ಮಕ್ಕಳನ್ನು ತೀವ್ರ ಆತಂಕ ಮತ್ತು ಆಕ್ರೋಶಕ್ಕೆ ಕಾರಣವಾಗಿದೆ.

ಇದು ಬರೀ ಸಂಯೋಜಿತ ಕಾಲೇಜು ವಿದ್ಯಾರ್ಥಿಗಳಿಗೆ ಎದುರಾಗಿರುವ ಸಮಸ್ಯೆ ಮಾತ್ರವಲ್ಲ ಸ್ವತಃ ಬೆಂಗಳೂರು ವಿವಿಯಲ್ಲಿ ವ್ಯಾಸಂಗ ಮಾಡುತ್ತಿರುವ ಎಂ.ಕಾಂ ವಿದ್ಯಾರ್ಥಿಗಳ ಫಲಿತಾಂಶವನ್ನು ವಾಣಿಜ್ಯ ಕೇಂದ್ರದಿಂದ ತಪ್ಪಾಗಿ ನಮೂದಿಸಲಾಗಿದೆ ಎಂದು ಮಾಹಿತಿ ಲಭ್ಯವಾಗಿದೆ.

ನಿಯಮಾನುಸಾರ ಸಂಯೋಜಿತ ಕಾಲೇಜು, ವಿದ್ಯಾರ್ಥಿಗಳಿಗೂ ವಿವಿಯೇ ಪರೀಕ್ಷೆ ನಡೆಸಿ ಮೌಲ್ಯಮಾಪನ ಮಾಡುತ್ತದೆ. ಬಳಿಕ ಫಲಿತಾಂಶವನ್ನು ಯುಯುಸಿಎಂಎಸ್ ನಲ್ಲಿ ಯಾವುದೇ ಲೋಪಗಳಾಗದಂತೆ ಎಚ್ಚರಿಕೆಯಿಂದ ಅಪ್‌ಲೋಡ್ ಮಾಡುವುದು ಆಯಾ ವಿಭಾಗಗಳ ಮುಖ್ಯಸ್ಥರ ಜವಾಬ್ದಾರಿ. ಆದರೆ ವಾಣಿಜ್ಯ ವಿಭಾಗದ ಫಲಿತಾಂಶವನ್ನು ಅಪ್‌ಲೋಡ್ ಮಾಡುವಾಗ ಡೆಸರ್ಟೇಷನ್ ಮತ್ತು ವೈವಾ ಅಂಕಗಳನ್ನು ಅಪ್‌ಲೋಡ್ ಮಾಡಲಾಗಿದೆ ಎನ್ನುತ್ತವೆ. ವಿವಿಧ ಕಾಲೇಜುಗಳ ಅಧ್ಯಾಪಕ ಹಾಗೂ ಆಡಳಿತ ಮಂಡಳಿಯ ಮೂಲಗಳು.

ಇದರಿಂದ ಪಾಸಾಗಬೇಕಾಗಿರುವ 400 ವಿದ್ಯಾರ್ಥಿಗಳು ಫೇಲ್ ಆಗಿರುತ್ತಾರೆ. ಇದನ್ನು ಸದನದಲ್ಲಿ ಪ್ರಸ್ತಾಪಿಸಲು ಅವಕಾಶ ನೀಡಬೇಕೆಂದು ಕೋರುತ್ತೇನೆ.

ಉತ್ತರ:

ಬೆಂಗಳೂರು ವಿಶ್ವವಿದ್ಯಾಲಯಕ್ಕೆ (ಜ್ಞಾನಭಾರತಿ) ಸಂಯೋಜನೆಗೊಂಡ ಕೆಲವು ಕಾಲೇಜುಗಳಲ್ಲಿ ಕಾಲೇಜಿನ ಪ್ರಾಂಶುಪಾಲರುಗಳು ಅವರ ಲಾಗಿನ್‌ಗಳಲ್ಲಿ ಎಂ.ಕಾಂ ವಿದ್ಯಾರ್ಥಿಗಳ ಅಂತಿಮ ಸೆಮಿಸ್ಟರ್ ಪರೀಕ್ಷೆಯ ಅಂಕಗಳನ್ನು ನಮೂದು ಮಾಡುವಾಗ ತಾಂತ್ರಿಕ ದೋಷದಿಂದಾಗಿ ಫಲಿತಾಂಶದಲ್ಲಿ ಲೋಪವಾಗಿರುತ್ತದೆ. ತದನಂತರದಲ್ಲಿ, ಬೆಂಗಳೂರು ವಿಶ್ವವಿದ್ಯಾಲಯದ ವಾಣಿಜ್ಯ ವಿಭಾಗದ ಮುಖ್ಯಸ್ಥರು ಸಲ್ಲಿಸಿದ್ದ ಮನವಿಯನ್ವಯ, ಕುಲಸಚಿವರು (ಮೌಲ್ಯಮಾಪನ) ಇವರು ಯು.ಯು.ಸಿ.ಎಂ.ಎಸ್ ವಿಶೇಷ ಕರ್ತವ್ಯಾಧಿಕಾರಿ ಇವರನ್ನು ಸಂಪರ್ಕಿಸಿ ಫಲಿತಾಂಶ ಪ್ರಕಟಿಸುವ ದಿನ ತಾಂತ್ರಿಕ ದೋಷದಿಂದ ತಪ್ಪಾದ ಅಂಕಗಳು ಪ್ರಕಟವಾಗಿದ್ದನ್ನು ಸರಿಪಡಿಸಿ (ಡೆಸರ್ಟೇಷನ್ ಮತ್ತು ವೈವಾ ಅಂಕಗಳು) ಮರುದಿನ ಬೆಳಿಗ್ಗೆ 10.00 ಗಂಟೆಗೆ ಫಲಿತಾಂಶವನ್ನು ಸರಿಪಡಿಸಿ ಪ್ರಕಟಿಸಲಾಗಿರುತ್ತದೆ. ಸದರಿ ಸಂಯೋಜಿತ ಕಾಲೇಜುಗಳ ಎಲ್ಲಾ ವಿದ್ಯಾರ್ಥಿಗಳು ಉತ್ತೀರ್ಣರಾಗಿರುತ್ತಾರೆ.

*****

ಸಂಖ್ಯೆ: ಇಡಿ/482 /ಯುಬಿವಿ/2025

(ಡಾ: ಎಂ.ಸಿ. ಸುಧಾಕರ್)
ಉನ್ನತ ಶಿಕ್ಷಣ ಸಚಿವರು